# ಮಹದಾಯಿ ಮೇಲೆ ಮೇಲುಸ್ತುವಾರಿ

23/2/21

**ಪಣಜಿ:** ಮಹದಾಯಿ ನದಿ ನೀರು ಹಂಚಿಕೆ ವಿಚಾರದಲ್ಲಿ ಸುಪ್ರೀಂಕೋರ್ಟ್‌ನಲ್ಲಿ ಕರ್ನಾಟಕಕ್ಕೆ ಹಿನ್ನಡೆಯಾಗಿದೆ.

ಕರ್ನಾಟಕವು ಮಹದಾಯಿ ನದಿ ನೀರನ್ನು ತಿರುಗಿಸುತ್ತಿದೆ ಎಂಬ ಗೋವಾ ಸರ್ಕಾರದ ಆರೋಪವನ್ನು ಪರಿಗಣನೆಗೆ ತೆಗೆದುಕೊಂಡ ನ್ಯಾ. ಡಿ.ವೈ.ಚಂದ್ರಚೂಡ್ ಅವರ ನೇತೃತ್ವದ ನ್ಯಾಯಪೀಠ, ಮೇಲುಸ್ತುವಾರಿ ಸಮಿತಿ ರಚನೆಗೆ ಆದೇಶ ನೀಡಿದೆ. ಈ ಸಂಬಂಧ ಗೋವಾ ಸರ್ಕಾರ, ಕರ್ನಾಟಕದ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣವನ್ನೂ ದಾಖಲಿಸಿತ್ತು.

ಕರ್ನಾಟಕವು ಮಹದಾಯಿ ನದಿ ನೀರನ್ನು ತಿರುಗಿಸುತ್ತಿದೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಗೋವಾ, ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ಅಧಿಕಾರಿಗಳ ಜಂಟಿ ಪರಿಶೀಲನೆಗೆ ಆದೇಶ ನೀಡಿದೆ. ಅಧಿಕಾರಿಗಳು ಒಂದು ವಾರದ ಒಳಗೆ ವರದಿ ಸಲ್ಲಿಸಬೇಕು ಎಂದೂ ಸೂಚಿಸಿದೆ ಎಂದು ಗೋವಾ ಪರ ವಕೀಲ ಎ.ಜಿ. ಪಾಂಗಮ್ ಮಾಹಿತಿ ನೀಡಿದ್ದಾರೆ. ಕೋವಿಡ್-19 ವೈರಸ್ ಭೀತಿ ಹಿನ್ನೆಲೆಯಲ್ಲಿ ನ್ಯಾಯಾಲಯ ಕಳೆದೊಂದು ವರ್ಷದಿಂದ ಈ ಪ್ರಕರಣದ ವಿಚಾರಣೆ ಕೈಗೆತ್ತಿಕೊಳ್ಳಲು ಸಾಧ್ಯವಾಗಿರಲಿಲ್ಲ.